## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೋವಿಡ್-19 RT-PCR ಪರೀಕ್ಷೆಗಾಗಿ ಖಾಸಗಿ ಪ್ರಯೋಗಾಲಯಗಳಿಗೆ ಸರ್ಕಾರದಿಂದ ಕಳುಹಿಸಲಾದ ಮಾದರಿಗಳ ಪರೀಕ್ಷಾ ಫಲಿತಾಂಶದ ವೆಚ್ಚವನ್ನು ಸಮಯಾಧಾರಿತವಾಗಿ ಪಾವತಿಸುವ ಕುರಿತು

To all DCs all DHOs

Office of the Commissioner
No. 4
Dt. 11 MAY 2021
Health & FWS, B'lore

ಓದಲಾಗಿದೆ: ೧) ಸರ್ಕಾರದ ಆದೇಶ ಸಂಖ್ಯೆ: ಆಕುಕ 312 ಸಿಜಿಎಂ 2020, ದಿನಾಂಕ: 3.9.2020 ಮತ್ತು ದಿನಾಂಕ: 11.12.2020.

೨) ಸರ್ಕಾರದ ಆದೇಶ ಸಂಖ್ಯೆ: ಆಕುಕ 432 ಅಮುಕಾ 2020,ದಿನಾಂಕ: 09-12-2020.

ಪ್ರಸ್ತಾವನೆ:

ಮೇಲೆ ಓದಲಾದ (1) ರ ಆದೇಶಗಳಲ್ಲಿ ಖಾಸಗಿ ಪ್ರಯೋಗಾಲಯಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳನ್ನು ಪ್ರೋತ್ಸಾಹಿಸುವ ಹಾಗೂ ಕೋವಿಡ್-19 ಪರೀಕ್ಷೆಯ ಫಲಿತಾಂಶ ವಿಳಂಬವಾಗದಂತೆ ಎಚ್ಚರವಹಿಸುವ ನಿಟ್ಟಿನಲ್ಲಿ ಕೋವಿಡ್-19 RT-PCR ಪರೀಕ್ಷೆಗಾಗಿ ಖಾಸಗಿ ಪ್ರಯೋಗಾಲಯಗಳಿಗೆ ಸರ್ಕಾರದಿಂದ ಕಳುಹಿಸಲಾದ ಮಾದರಿಗಳ ಪರೀಕ್ಷಾ ಫಲಿತಾಂಶದ ವೆಚ್ಚವನ್ನು ಪರಿಷ್ಕರಿಸಿ ಆದೇಶಿಸಲಾಗಿತ್ತು.

ಮೇಲೆ ಓದಲಾದ (2) ರ ಆದೇಶದಲ್ಲಿ ಕೋವಿಡ್ -19 ಪತ್ತೆ ಹಚ್ಚಲು ಆರ್.ಟಿ.ಪಿ.ಸಿ.ಆರ್, ಟ್ರೂ ನ್ಯಾಟ್, ಸಿ.ಬಿ.ನ್ಯಾಟ್, rapid antigen ಹಾಗು rapid anti-body ಪರೀಕ್ಷೆಗಳ ದರವನ್ನು ಮರುನಿಗದಿಪಡಿಸಲಾಗಿರುತ್ತದೆ.

ಕೋವಿಡ್-19 ಸಾಂಕ್ರಾಮಿಕ ರೋಗದ 2 ನೇ ಅಲೆಯು ಹೆಚ್ಚಾಗಿರುವ ಹಿನ್ನಲೆಯಲ್ಲಿ, ಕೋವಿಡ್-19 ಪರೀಕ್ಷಿಸುವ ಖಾಸಗಿ ಪ್ರಯೋಗಾಲಯಗಳಿಂದ ಫಲಿತಾಂಶ ವಿಳಂಬವಾಗುತ್ತಿದ್ದು, ಇದನ್ನು ಸರಿಪಡಿಸುವ ನಿಟ್ಟಿನಲ್ಲಿ ಮತ್ತು ಸಲಹಾ ಸಮಿತಿಯ ಶಿಫಾರಸ್ಸಿನನ್ವಯ ಸಮಗ್ರವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಕುಕ 153 ಎಸಿಎಸ್ 2021**
**ಬೆಂಗಳೂರು,ದಿನಾಂಕ: 10.5.2021**

ಖಾಸಗಿ ಪ್ರಯೋಗಾಲಯಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳನ್ನು ಪ್ರೋತ್ಸಾಹಿಸುವ ಹಾಗೂ ಪರೀಕ್ಷೆಯ ಫಲಿತಾಂಶ ವಿಳಂಬವಾಗದಂತೆ ಎಚ್ಚರವಹಿಸುವ ನಿಟ್ಟಿನಲ್ಲಿ ಕೋವಿಡ್-19 RT-PCR ಪರೀಕ್ಷೆಗಾಗಿ ಖಾಸಗಿ ಪ್ರಯೋಗಾಲಯಗಳಿಗೆ ಸರ್ಕಾರದಿಂದ ಕಳುಹಿಸಲಾದ ಮಾದರಿಗಳ ಪರೀಕ್ಷಾ ಫಲಿತಾಂಶದ ವೆಚ್ಚವನ್ನು, ಕೆಳಕಂಡಂತೆ ಪರಿಷ್ಕರಿಸಿ ಆದೇಶಿಸಿದೆ.

- 24 ರಿಂದ 48 ಗಂಟೆಗಳ ಒಳಗೆ ಪರೀಕ್ಷಾ ಫಲಿತಾಂಶವನ್ನು ಒದಗಿಸುವ ಮತ್ತು ಅದೇ ಸಮಯದೊಳಗೆ ICMR ವೆಬ್ ಪೋರ್ಟಲ್‌ನಲ್ಲಿ ನಮೂದಿಸುವ ಖಾಸಗಿ ಪ್ರಯೋಗಾಲಯಗಳಿಗೆ ಪ್ರತಿ ಪರೀಕ್ಷೆಗೆ ಈಗಾಗಲೇ ನಿಗದಿಪಡಿಸಿರುವ ದರದನ್ವಯ ವೆಚ್ಚ ಪಾವತಿಸತಕ್ಕದ್ದು.

- ಪರೀಕ್ಷಾ ಫಲಿತಾಂಶಗಳನ್ನು 48 ಗಂಟೆಗಳಿಗಿಂತ ವಿಳಂಬವಾಗಿ ನೀಡುವ ಮತ್ತು ವಿಳಂಬವಾಗಿ ICMR ವೆಬ್ ಪೋರ್ಟಲ್‌ನಲ್ಲಿ ನಮೂದಿಸುವ ಖಾಸಗಿ ಪ್ರಯೋಗಾಲಯಗಳಿಗೆ ಪ್ರತಿ ಪರೀಕ್ಷೆಗೆ ಶೇ.20ರಷ್ಟು ದಂಡವನ್ನು ವಿಧಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

19/5/21
(ಜಾವೇದ್ ಅಖ್ತರ್)
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ

ಇವರಿಗೆ,

1. ಪ್ರಧಾನ ಮಹಾಲೇಖಪಾಲರು(ಜಿ&ಎಸ್‌ಎಸ್‌ಎ)/(ಇ&ಆರ್‌ಎಸ್‌ಎ),ಹೊಸ ಕಟ್ಟಡ,ಆಡಿಟ್ ಭವನ,ಅಂಚೆ ಪೆಟ್ಟಿಗೆ-5398,ಬೆಂಗಳೂರು-01
2. ಪ್ರಧಾನ ಮಹಾಲೇಖಪಾಲರು(ಎ&ಇ),ಪಾರ್ಕ್‌ಹೌಸ್ ರಸ್ತೆ,ಅಂಚೆಪೆಟ್ಟಿಗೆ-5329,ಬೆಂಗಳೂರು-
3. ಆಯುಕ್ತರು,ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು,ಆರೋಗ್ಯ ಸೌಧ, ಬೆಂಗಳೂರು.
4. ಅಭಿಯಾನ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಆರೋಗ್ಯ ಸೌಧ, ಬೆಂಗಳೂರು.
5. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಆನಂದರಾವ್ ವೃತ್ತ, ಬೆಂಗಳೂರು.
6. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ.
7. ಎಲ್ಲಾ ವೈದ್ಯಕೀಯ ಸಂಸ್ಥೆಗಳ ನಿರ್ದೇಶಕರುಗಳಿಗೆ.
8. ಎಲ್ಲಾ ಜಿಲ್ಲೆಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಿಗೆ.

ಪ್ರತಿ ಮಾಹಿತಿಗಾಗಿ:-

1) ಮಾನ್ಯ ಆಕುಕ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ,ಬೆಂಗಳೂರು.
2) ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
4)ಜಂಟಿ ಕಾರ್ಯದರ್ಶಿ/ಉಪಕಾರ್ಯದರ್ಶಿ ಯವರ ಆಪ್ತ ಸಹಾಯಕರು.